# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ-181 ಹೊಸಕೆರೆಹಳ್ಳಿ, ಬೆಂಗಳೂರು

---

ಸಂ: ಸ.ಅ/ವಾ-161/ಪಿ.ಆರ್/02/2021-22 ದಿನಾಂಕ : 27-09-2021

## ವಾರ್ಡ್ ಸಮಿತಿಯ ಸಭೆಯ ನಡವಳಿಗಳು

**ವಿಷಯ:-** ಮಾನ್ಯ ಆಯುಕ್ತರು ಬಿ.ಬಿ.ಎಂ.ಪಿ ರವರ ಆದೇಶ ಸಂಖ್ಯೆ :ಬಿ12(58)ಪಿಆರ್/35/2020-21 ದಿನಾಕ :21-09-2020 ರವರ ಆದೇಶದಂತೆ ದಿನಾಂಕ :27-09-2021 ರಂದು ವಾರ್ಡ್ ಸಂಖ್ಯೆ-161 ಹೊಸಕೆರೆಹಳ್ಳಿ ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು.

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ವಾರ್ಡ್ ಕಮಿಟಿ ಸಭೆ ನಿಗಧಿಪಡಿಸಿ ದಿನಾಂಕ :27-09-2021 ರಂದು ವಾರ್ಡ್ ಕಛೇರಿಯಲ್ಲಿ ಬೆಳಿಗ್ಗೆ 10.30 ಗಂಟೆಗೆ ಶ್ರೀ ಧರಣೇಂದ್ರಕುಮಾರ್ ನೋಡೆಲ್ ಅಧಿಕಾರಿಗಳು ರವರ ಅಧ್ಯಕ್ಷತೆಯಲ್ಲಿ ಹಾಗೂ ಶ್ರೀ ವೆಂಕಟಮಲವಯ್ಯ.ಕೆ ಸದಸ್ಯ ಕಾರ್ಯದರ್ಶಿ ರವರ ಕಾರ್ಯಾದ್ಯಕ್ಷತೆಯಲ್ಲಿ ವಾರ್ಡ್ ಸಮಿತಿ ಸದಸ್ಯರುಗಳು ಹಾಗೂ ಸಂಬಂಧಿಸಿದ ಅಧಿಕಾರಿಗಳೊಂದಿಗೆ ನಡೆದ ಸಭೆಯ ನಡವಳಿಗಳು.

ಸಭೆಯಲ್ಲಿ ವಾರ್ಡ್ ಸಮಿತಿ ಸದಸ್ಯರುಗಳು ಹಾಗೂ ಎಲ್ಲಾ ಇಲಾಖೆಯ ಅಧಿಕಾರಿ ವರ್ಗದವರು ಹಾಜರಿರುತ್ತಾರೆ.

ಹಿಂದಿನ ವಾರ್ಡ್ ಸಭೆಯ ನಡವಳಿಗಳನ್ನು ಚರ್ಚಿಸಲಾಗಿರುತ್ತದೆ.

1) ತೋಟಗಾರಿಕೆ ಇಲಾಖೆಯ ಉಸ್ತುವಾರಿ ಅಧಿಕಾರಿಗಲು ಸಭೆಗೆ ಹಾಜರಾಗದಿರುವ ಬಗ್ಗೆ ಸದಸ್ಯರು ಪ್ರಸ್ತಾವನೆ ಮಾಡಿದಾಗ, ಮಾನ್ಯ ಅಧ್ಯಕ್ಷರು ಮಾತನಾಡಿ ಮುಂದಿನ ಸಭೆಗೆ ತಪ್ಪದೇ ಹಾಜರಾಗುವಂತೆ ಸೂಚಿಸಿರುತ್ತಾರೆ.
2) ಆನಮಂಡಳಿಯ ವತಿಯಿಂದ ಭೋರ್‌ವೇಲ್ ನಿರ್ವಹಣೆಯ ಬಗ್ಗೆ ಸಂಬಂಧಿಸಿದ ಅಭಿಯಂತರರಾದ ಶ್ರೀ ನಾಗರಾಜು (ಮೊ.ನಂ-9845451380) ರವರನ್ನು ಸಂಪರ್ಕಿಸಲು ಸಭೆಯಲ್ಲಿ ಸೂಚಿಸಲಾಗಿರುತ್ತದೆ.
3) ಸಭೆಯಲ್ಲಿ ಸಮಿತಿಯ ಸದಸ್ಯರ ಟಿಪ್ಪಣಿಯಂತೆ ಹೊಸಕೆರೆಹಳ್ಳಿ ಶ್ರೀ ರಾಘವೇಂದ್ರಸ್ವಾಮಿ ಮಠದ ರಸ್ತೆಯಲ್ಲಿ ಬಿ.ಡಬ್ಲ್ಯೂ.ಎಸ್.ಎಸ್.ಬಿ ಯಿಂದ ಪೈಪ್‌ಲೈನ್ ಅಳವಡಿಸಿ ರಸ್ತೆಯನ್ನು ಮರು ನಿರ್ಮಾಣ ಮಾಡಿಕೊಡಲು ಅಧಿಕಾರಿಗಳಿಗೆ ಸೂಚಿಸಲಾಗಿ ಬಿ.ಡಬ್ಲ್ಯೂ.ಎಸ್.ಎಸ್.ಬಿ ಅಧಿಕಾರಿಗಳು ರಸ್ತೆಯನ್ನು ಮರು ನಿರ್ಮಾಣ ಮಾಡಿಕೊಡಲು ಒಪ್ಪಿರುತ್ತಾರೆ.
4) ಹೊಸಕೆರೆಹಳ್ಳಿಯಲ್ಲಿ ಸಿ.ಸಿ ಕ್ಯಾಮರಾಗಳನ್ನು ಪೋಲೀಸ್ ಇಲಾಖೆಯಿಂದಲೇ ನಿರ್ವಹಿಸುವಂತೆ ಸಭೆಯಲ್ಲಿ ಸದಸ್ಯರು ಸೂಚಿಸಿರುತ್ತಾರೆ.
5) ವಾರ್ಡ್ ಸಂಬಂಧಿಸಿದ ಪೋಲೀಸ್ ಇಲಾಖೆಯ ಮೊಬೈಲ್ ಸಂಖ್ಯೆಗಳನ್ನು ಸಾರ್ವಜನಿಕರ ಅನುಕೂಲಕ್ಕಾಗಿ ತಿಳಿಸಲಾಗಿದೆ. 1) 9480801528 ಗಿರಿನಗರ ಪೋಲೀಸ್ ಠಾಣೆ, 2) 9480801532 ಚೆನ್ನಮ್ಮಕೆರೆ ಅಚ್ಚುಕಟ್ಟು ಪೋಲೀಸ್ ಠಾಣೆ, 3) 9480801929 ಸಂಚಾರಿ ಪೋಲೀಸ್ ಠಾಣೆ

ರಕೋಡಿಯಲ್ಲಿ ಬೀದಿ ದೀಪದ ಸಮಸ್ಯೆಯನ್ನು ಸರಿಪಡಿಸಲು ಸಭೆಯಲ್ಲಿದ್ದ ಅಧಿಕಾರಿಗಳಿಗೆ ಸೂಚಿಸಲಾಗಿರುತ್ತದೆ.

7) ಹೊಸಕೆರೆಹಳ್ಳಿ ಮುಖ್ಯರಸ್ತೆಗಳಲ್ಲಿ ಪೋಲೀಸ್ ಇಲಾಖೆಯಿಂದ ಬೀಟ್ ಮಾಡಲು ಸಭೆಯಲ್ಲಿ ಸೂಚಿಸಲಾಗಿರುತ್ತದೆ.

8) ತಿಮ್ಮರಾಯಿಗೌಡ ಬಡಾವಣೆಯ ಪಾದಚಾರಿ ಮಾರ್ಗದಲ್ಲಿ ವ್ಯಾಪಾರಿಗಳನ್ನು ತೆರವುಗೊಳಿಸಲು ಸೂಚಿಸಲಾಗಿದೆ.

9) ಮುಖ್ಯರಸ್ತೆಗಲ್ಲಿ ಟ್ರಾಫಿಕ್ ಸಿಂಗ್ನಲ್ ಹತ್ತಿರ ಬಸ್ ನಿಲ್ದಾಣಗಳನ್ನು ತಪ್ಪಿಸಲು ಸಭೆಯಲ್ಲಿ ಸೂಚಿಸಲಾಗಿದೆ.

10) ಮತದಾರರ ಗುರುತಿನ ಚೀಟಿಯಲ್ಲಿ ಹೊಸದಾಗಿ ಸಾರ್ವಜನಿಕರನ್ನು ಸೇರಿಸುವುದು ಮತ್ತು ವಾರ್ಡ್‌ನಲ್ಲಿ ಇಲ್ಲದವರನ್ನು ಪಟ್ಟಿಯಿಂದ ತೆಗೆಯುವ ಬಗ್ಗೆ ಸಭೆಯಲ್ಲಿ ಚರ್ಚಿಸಲಾಗಿದೆ.

11) ದತ್ತಾತ್ರೇಯನಗರದ 4ನೇ ಮತ್ತು 5ನೇ ಮುಖ್ಯರಸ್ತೆಯಲ್ಲಿ ಖಾಸಗಿ ಸ್ವತ್ತಿನಲ್ಲಿ ಸ್ವತ್ತಿನ ಮಾಲೀಕರ ತಡೆಯಿಂದ ಹಾಕಲಾಗಿರುವ ತಾತ್ಕಾಲಿಕ ಶೆಡ್‌ಗಳನ್ನು ತೆಗೆಯಲು ನೋಟೀಸ್ ನೀಡಲು ಸಭೆಯಲ್ಲಿ ಚರ್ಚಿಸಲಾಗಿರುತ್ತದೆ.

ಮಾನ್ಯ ಆಯುಕ್ತರವರ ಸೂಚನೆಯಂತೆ ಪ್ರತಿ ಒಂದನೇ ಹಾಗೂ ಮೂರನೇ ಶನಿವಾರದಂದು ವಾರ್ಡ್ ಸಮಿತಿ ಸಭೆಯನ್ನು ಆಯೋಜಿಸಲು ಹಾಗೂ ವಾರ್ಡ್‌ಗೆ ಸಂಬಂಧಿಸಿದ ಎಲ್ಲಾ ವಿಭಾಗದ ಅಧಿಕಾರಿಗಳು ಸಭೆಯಲ್ಲಿ ಹಾಜರಿರಲು ಕೋರುತ್ತಾ ಮತ್ತು ಮುಂದಿನ ಸಭೆಯಲ್ಲಿ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಶನ್ ರವರನ್ನು ಹೆಚ್ಚಿನ ಸಂಖ್ಯೆಯಲ್ಲಿ ಆಹ್ವಾನಿಸಲು ಸಂಚಾಲಕರಿಗೆ ಸೂಚಿಸಿ ಸಭೆಯಲ್ಲಿ ಯಾವುದೇ ಪ್ರಸ್ತಾವನೆ ಮಾಡದಿದ್ದ ಕಾರಣ ನೋಡಲ್ ಅಧಿಕಾರಿ/ಅಧ್ಯಕ್ಷರ ಅಪ್ಪಣೆ ಮೇರೆಗೆ ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ವಾರ್ಡ್ ಸಮಿತಿ ಸಂಚಾಲಕರು

ವಾರ್ಡ್ 161 ರ ನೋಡಲ್ ಅಧಿಕಾರಿ.